17.12.24

(48)

**ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ಹಣಮಂತ ರುದ್ರಪ್ಪ ನಿರಾಣಿ ಇವರು ಶೂನ್ಯ ವೇಳೆಯಲ್ಲಿ ಪ್ರಸ್ತಾಪಿಸಿರುವ ಸೂಚನೆಗೆ ಉತ್ತರ ಒದಗಿಸುವ ಬಗ್ಗೆ.**

## <u>ಸೂಚನೆ</u>

"ಇತ್ತೀಚಿಗೆ ನಡೆದ ಗೆಜೆಟೆಡ್ ಪ್ರೊಬೆಷನರಿ ಪರೀಕ್ಷೆಯ ಪ್ರಶ್ನೆ ಪತ್ರಿಕೆಯಲ್ಲಿ ದೋಷ ಕಂಡು ಬಂದ ಬಳಿಕ ಪರೀಕ್ಷೆ ಮುಂದೂಡಿಕೆಯಾಗಿ 4 ತಿಂಗಳು ಕಳೆದರೂ ಈ ಪ್ರಮಾದಕ್ಕೆ ಹೊಣೆ ಯಾರೆಂಬುದನ್ನು ಸರ್ಕಾರ ಇನ್ನೂ ನಿರ್ಧರಿಸಿಲ್ಲ ಹಾಗೂ ಕ್ರಮವು ಜರುಗಿಸದೇ ಇರುವುದು ನೋವಿನ ಸಂಗತಿಯಾಗಿದೆ. ಇದರಿಂದಾಗಿ ಪರೀಕ್ಷೆಗೆ ಕೆಪಿಎಸ್‌ಸಿ ವೆಚ್ಚ ಮಾಡಿದ್ದ 13 ಕೋಟಿ ರೂ. ನೀರಿನಲ್ಲಿ ಹುಣಸೆ ಹಣ್ಣನ್ನು ತೊಳೆದಂತಾಗಿದೆ. ಅಸಲಿಗೆ ಪ್ರಶ್ನೆಪತ್ರಿಕೆ ಎಡವಟ್ಟಿನ ವಿಚಾರವನ್ನು ಸರ್ಕಾರ ಗಂಭೀರವಾಗಿ ಪರಿಗಣಿಸಿದಂತೆಯೇ ಕಾಣುತ್ತಿಲ್ಲ. ಒಂದೂವರೆ ಲಕ್ಷಕ್ಕೂ ಅಧಿಕ ಅಭ್ಯರ್ಥಿಗಳು ರಾಜ್ಯದಲ್ಲಿ ಪರೀಕ್ಷೆ ಎದುರಿಸಿದ್ದರೂ, ಪ್ರಶ್ನೆ ಪತ್ರಿಕೆಯಲ್ಲಿನ ಭಾಷಾಂತರ ದೋಷದಿಂದಾಗಿ ಸರ್ಕಾರ ಪರೀಕ್ಷೆ ಮುಂದೂಡಿತ್ತು.

ಆಯೋಗವು 2024ರ ಸಾಲಿಗೆ ಅಧಿಸೂಚಿಸಿದ್ದ ಕೆಎಎಸ್ ಪರೀಕ್ಷೆಗೆ 2,10,916 ಅಭ್ಯರ್ಥಿಗಳು ಅರ್ಜಿ ಸಲ್ಲಿಸಿದ್ದರು. ಅದರಂತೆ ಪೂರ್ವಭಾವಿ ಪರೀಕ್ಷೆಯಲ್ಲಿನ ಕನ್ನಡ ಪ್ರಶ್ನೆ ಪತ್ರಿಕೆಯ ಕೆಲವು ಪ್ರಶ್ನೆಗಳಲ್ಲಿ ಭಾಷಾಂತರ ಲೋಪ ಕಂಡುಬಂದಿತ್ತು. ಈ ಪರೀಕ್ಷೆಗೆ ಸಂಬಂಧಿಸಿದಂತೆ ಆಯೋಗವು ಸರ್ಕಾರಕ್ಕೆ ವರದಿ ನೀಡಿತ್ತು. ಆ ಪ್ರಕಾರ ಹಲವು ಅಂಶ ಗಮನಾರ್ಹವಾಗಿದೆ. ಪೂರ್ವಭಾವಿ ಪರೀಕ್ಷೆಯಲ್ಲಿನ ಪ್ರಶ್ನೆಗಳ ಕನ್ನಡ ಭಾಷಾಂತರದಲ್ಲಿನ ಲೋಪ ಪರಿಶೀಲಿಸಲು, ಪ್ರಾಧ್ಯಾಪಕರು, ಸಹ ಪ್ರಾಧ್ಯಾಪಕರು ಹಾಗೂ ಸಹಾಯಕ ಪ್ರಾಧ್ಯಾಪಕರ ದರ್ಜೆಯಲ್ಲಿರುವಂತಹ ಹಾಗೂ ಉತ್ತಮ ಕನ್ನಡ ಭಾಷಾ ಜ್ಞಾನ ಹೊಂದಿರುವವರಿಗೆ ಆಧ್ಯತೆ ನೀಡಲಾಗಿದೆ. ಪ್ರಶ್ನೆ ಪತ್ರಿಕೆಯಲ್ಲಿ ದೋಷಗಳ ಮಾಹಾಪೂರವೇ ಕಾಣಿಸಿದ್ದನ್ನು ಅಭ್ಯರ್ಥಿಗಳು ಬಹಿರಂಗಪಡಿಸಿ, ಆಕ್ಷೇಪಿಸಿ ಪ್ರತಿಭಟನೆಗಳೂ ಸಹ ನಡೆದಿದ್ದರು, ಆಯೋಗಕ್ಕೆ ಭಾಷಾಂತರಕಾರರು ಸಲ್ಲಿಸಿದ್ದ ವರದಿಯಲ್ಲೂ 50ಕ್ಕಿಂತ ಹೆಚ್ಚು ತಪ್ಪುಗಳಿರುವ ಮಾಹಿತಿ ಇದ್ದಿದ್ದು ಗಮನಾರ್ಹ ವಿಷಯವಾಗಿದೆ.

ಆದರೂ ಸಹ ಈ ವರೆಗೂ ಈ ಪ್ರಕರಣದಲ್ಲಿ ಯಾವುದೇ ಕ್ರಮವಾಗಿಲ್ಲ, ಕ್ರಮಕೈಗೊಳ್ಳುವ ಸುಳಿವೂ ಇಲ್ಲವಾಗಿದೆ. ಸರ್ಕಾರಕ್ಕೆ ಸುಮಾರು 13 ಕೋಟಿ ರೂಪಾಯಿಕ್ಕಿಂತ ಹೆಚ್ಚು ನಷ್ಟ ಮಾಡಿದವರ ವಿರುದ್ಧ ನಿರ್ಧಾಕ್ಷಿಣ ಕ್ರಮ ಕೈಗೊಂಡು ಮುಂದಿನ ದಿನಗಳಲ್ಲಿ ಈ ತರಹದ ತಪ್ಪುಗಳು ಮರುಕಳಿಸದಂತೆ ಕ್ರಮ

ಕೈಗೊಳ್ಳಬೇಕೆಂದು ತಮ್ಮ ಮೂಲಕ ಈ ಮೂಲಕ ಸರ್ಕಾರವನ್ನು ಶೂನ್ಯ ವೇಳೆಯಲ್ಲಿ ಒತ್ತಾಯಿಸುತ್ತೇನೆ."

**ಹೇಳಿಕೆ**

ಕರ್ನಾಟಕ ಲೋಕಸೇವಾ ಆಯೋಗವು 2024ರ ಆಗಸ್ಟ್ 27ರಂದು ನಡೆಸಿದ ಕೆ.ಎ.ಎಸ್ ಪೂರ್ವಭಾವಿ ಪರೀಕ್ಷೆಯಲ್ಲಿನ ಕನ್ನಡ ಪ್ರಶ್ನೆ ಪತ್ರಿಕೆಯಲ್ಲಿ ಕೆಲವು ಪ್ರಶ್ನೆಗಳಲ್ಲಿ ಭಾಷಾಂತರ ಲೋಪ ಕಂಡುಬಂದಿದೆಯೆಂದು ಪರೀಕ್ಷೆಗೆ ಹಾಜರಾದ ಹಲವಾರು ಅಭ್ಯರ್ಥಿಗಳು ತೀವ್ರವಾಗಿ ಪ್ರತಿಭಟನೆಯನ್ನು ನಡೆಸಿದ ಹಿನ್ನೆಲೆಯಲ್ಲಿ ಮರುಪರೀಕ್ಷೆಯನ್ನು ನಡೆಸಲು ನಿರ್ಧರಿಸಲಾಗಿರುತ್ತದೆ.

ಪ್ರಶ್ನೆ ಪತ್ರಿಕೆಯಲ್ಲಿನ ಭಾಷಾಂತರ ಲೋಪದ ಬಗ್ಗೆ ಕರ್ನಾಟಕ ಲೋಕಸೇವಾ ಆಯೋಗದಿಂದ ವಿವರಣೆಯನ್ನು ಪಡೆಯಲಾಗಿದ್ದು, ಈ ಸಂಬಂಧ ಆಯೋಗವು ಮೂವರು ವಿಷಯ ತಜ್ಞರುಗಳನ್ನೊಳಗೊಂಡ ಒಟ್ಟು 11 ಸಮಿತಿಗಳನ್ನು ರಚಿಸಿ ವರದಿ ಪಡೆದಿರುತ್ತದೆ. ಸದರಿ ವರದಿಯಲ್ಲಿ ಭಾಷಾಂತರದ ಲೋಪದಿಂದಾಗಿ ಪತ್ರಿಕೆ-1ರಲ್ಲಿ 05 ಪ್ರಶ್ನೆಗಳಿಗೆ ಹಾಗೂ ಪತ್ರಿಕೆ- 02 ರಲ್ಲಿನ 05 ಪ್ರಶ್ನೆಗಳ ಕೀ-ಉತ್ತರಗಳು ಪರಿಷ್ಕೃತಗೊಳ್ಳಲಿವೆ ಎಂದು ವಿಷಯ ತಜ್ಞರು ಅಭಿಪ್ರಾಯವನ್ನು ನೀಡಿರುತ್ತಾರೆ.

ಈ ಹಿನ್ನೆಲೆಯಲ್ಲಿ ಕರ್ನಾಟಕ ಲೋಕಸೇವಾ ಆಯೋಗವು ನಡೆಸುವ ಪರೀಕ್ಷೆಗಳ ಪ್ರಶ್ನೆ ಪತ್ರಿಕೆಗಳಲ್ಲಿನ ಕನ್ನಡ ಭಾಷಾಂತರ ಕಾರ್ಯವನ್ನು ಯಾವುದೇ ಲೋಪದೋಷಗಳಿಲ್ಲದೆ ಸಿದ್ಧಪಡಿಸಲು ಸರ್ಕಾರವು ಹಲವಾರು ಸಭೆಗಳನ್ನು ನಡೆಸಿ ಆಯೋಗದಲ್ಲಿ ಪರಿಣಿತ ಭಾಷಾಂತರಕಾರರಿಗೆ ಜವಾಬ್ದಾರಿ ನೀಡುವುದು ಹಾಗೂ ಭಾಷಾಂತರವನ್ನು ಖಚಿತಗೊಳಿಸಲು ಪ್ರಶ್ನೆ ಪತ್ರಿಕೆ ಸಿದ್ಧಪಡಿಸಿದವರನ್ನು ಜವಾಬ್ದಾರರನ್ನಾಗಿ ಮಾಡಲು ಕ್ರಮವಹಿಸುವುದು ಮತ್ತು ಮುಂದಿನ ದಿನಗಳಲ್ಲಿ ಈ ರೀತಿ ಲೋಪದೋಷಗಳಾಗದಂತೆ ಜಾಗರೂಕತೆಯಿಂದ ಮತ್ತು ಪಾರದರ್ಶಕತೆಯಿಂದ ಪರೀಕ್ಷೆಗಳನ್ನು ನಡೆಸುವಂತೆ ಆಯೋಗಕ್ಕೆ ಕಟ್ಟುನಿಟ್ಟಿನ ಸೂಚನೆಗಳನ್ನು ನೀಡಲಾಗಿದೆ.

ಸಿಆಸುಇ 312 ಎಸ್‌ಎಸ್‌ಸಿ 2024

(ಸಿದ್ದರಾಮಯ್ಯ)
ಮುಖ್ಯಮಂತ್ರಿ